ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

# ಪ್ರಕಟಣೆ

ಸಂಖ್ಯೆ : ಇಡಿ/ಕೆಇಎ/ಆಡಳಿತ/ಸಿ.ಆರ್.04/2023(ಕೆಕೆ) ದಿನಾಂಕ: 17.09.2024
ಸಂಖ್ಯೆ : ಇಡಿ/ಕೆಇಎ/ಆಡಳಿತ/ಸಿ.ಆರ್.04/2023(ಆರ್‌ಪಿಸಿ) ದಿನಾಂಕ: 17.09.2024

ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 166 ಸೇನೆನಿ 2024 ದಿನಾಂಕ 10.09.2024 ರಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ವಿವಿಧ ಇಲಾಖೆಗಳ ಗ್ರೂಪ್-ಸಿ ಮತ್ತು ಗ್ರೂಪ್-ಬಿ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಈಗಾಗಲೇ ಹೊರಡಿಸಿಲಾಗಿರುವ ಅಧಿಸೂಚನೆಗಳಿಗೆ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಒಂದು ಬಾರಿಗೆ ಅನ್ವಯವಾಗುವಂತೆ ಗರಿಷ್ಠ ವಯೋಮಿತಿಯಲ್ಲಿ 3 ವರ್ಷಗಳ ಸಡಿಲಿಕೆಯನ್ನು ನೀಡಿ ಆದೇಶಿಸಿರುತ್ತದೆ.

ಅದರಂತೆ ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ನೇರ ನೇಮಕಾತಿ ಸಂಬಂಧ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ದಿನಾಂಕ 20.02.2024 ರಂದು ವಿವರವಾದ ಅಧಿಸೂಚನೆಯನ್ನು ಪ್ರಕಟಿಸಿ 05.04.2024 ರಿಂದ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿತ್ತು ಮತ್ತು ದಿನಾಂಕ: 22.05.2024 ರವರೆಗೆ ಅರ್ಜಿ ಶುಲ್ಕ ಪಾವತಿಸಲು ಅವಕಾಶ ನೀಡಲಾಗಿತ್ತು. ಸರ್ಕಾರದ ಆದೇಶದಂತೆ ವಯೋಮಿತಿ ಸಡಿಲಿಕೆಯಿಂದ ಹೊಸದಾಗಿ ಅರ್ಜಿ ಸಲ್ಲಿಸಲು ನಿಗದಿಗೊಳಿಸಿದ ವೇಳಾ ಪಟ್ಟಿಯು ಈ ಕೆಳಗಿನಂತಿದೆ.

| | | |
|---|---|---|
| 1) ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆಗೆ ಪ್ರಾರಂಭಿಕ ದಿನಾಂಕ | : | 19.09.2024 |
| 2) ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆಗೆ ಕೊನೆಯ ದಿನಾಂಕ | : | 28.09.2024 |
| 3) ಆನ್‌ಲೈನ್ ಮೂಲಕ ಶುಲ್ಕ ಪಾವತಿಸಲು ಕೊನೆಯ ದಿನಾಂಕ | : | 29.09.2024 |

ಕಾರ್ಯನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in